# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 459(471) |
| ಸದಸ್ಯರ ಹೆಸರು | : ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : 20.02.2023 |
| ಉತ್ತರಿಸಬೇಕಾದ ಸಚಿವರು | : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಶೈಕ್ಷಣಿಕ ಮಂಡಳಿ / ಬೋರ್ಡ್‌ನೊಂದಿಗೆ ಯಾವುದೇ ರೀತಿಯ ಅಫಿಲಿಯೇಷನ್ ಹೊಂದದೆ ಹಲವಾರು ಶಿಕ್ಷಣ ಕಾರ್ಯ ನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಕುರಿತು ಸರ್ಕಾರದ ನಿಲುವೇನು; | ಬಂದಿದೆ,<br>ರಾಜ್ಯ ಪಠ್ಯಕ್ರಮದಲ್ಲಿ ಅನುಮತಿ ಪಡೆದು ಇತರೆ ಪಠ್ಯಕ್ರಮ ಬೋಧನೆ ಮಾಡುತ್ತಿರುವ ಶಾಲೆಗಳನ್ನು ಗುರುತಿಸಲು ಉಪನಿರ್ದೇಶಕರುಗಳಿಗೆ ಸೂಚನೆ ನೀಡಿದ್ದು, ಅಂತಹ ಶಾಲೆಗಳ ಮೇಲೆ ನಿಯಮಾನುಸಾರ ಕ್ರಮವಹಿಸಲು ತಿಳಿಸಲಾಗಿದೆ.<br>ಮುಂದುವರೆದು, ಶಾಲೆಗಳ ನೋಂದಣಿ, ಮಾನ್ಯತೆ, ಪಠ್ಯಕ್ರಮ ವಿಷಯದ ಕುರಿತು ಇಲಾಖಾ ತಂತ್ರಾಂಶದಲ್ಲಿ ಶಾಲಾ ಆಡಳಿತ ಮಂಡಳಿಗಳು ದಾಖಲೆಗಳನ್ನು ಕಡ್ಡಾಯವಾಗಿ ಇಂದೀಕರಿಸಲು ತಂತ್ರಾಂಶ ರೂಪಿಸಲಾಗುತ್ತಿದ್ದು, ತಂತ್ರಾಂಶದಲ್ಲಿ ಸದರಿ ದಾಖಲೆಗಳು ಸಾರ್ವಜನಿಕರಿಗೆ ಮುಕ್ತವಾಗಿ ಲಭ್ಯವಾಗುವಂತೆ ಅವಕಾಶ ಮಾಡಿಕೊಡಲಾಗುತ್ತಿದೆ. |
| ಆ) | Orchids International School ಬೆಂಗಳೂರು ಈ ಶಿಕ್ಷಣ ಸಂಸ್ಥೆಯವರು ಸಿ.ಬಿ.ಎಸ್.ಇ ಅಫಿಲಿಯೇಷನ್ ಹೊಂದಿದೆ ಎಂಬ ಕಾರಣವನ್ನು ನೀಡಿ ಪೋಷಕರನ್ನು ವಂಚಿಸಿರುವುದಲ್ಲದೆ, ಮಕ್ಕಳ ಭವಿಷ್ಯದೊಂದಿಗೆ ಚೆಲ್ಲಾಟವಾಡಿರುವ ಕುರಿತು ವರದಿ ದಾಖಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಶಿಕ್ಷಣ ಸಂಸ್ಥೆಯ ಪ್ರವರ್ತಕರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ; (ವಿವರ ನೀಡುವುದು) | ಆರ್ಕಿಡ್ಸ್ ಇಂಟರ್ ನ್ಯಾಷನಲ್ ಸ್ಕೂಲ್, ನಾಗರಭಾವಿ, ಬೆಂಗಳೂರು ಈ ಶಾಲೆಯ ಆಡಳಿತ ಮಂಡಳಿಯಾದ ಸೆಂಟ್ ಥೆರೆಸಾ ಎಜುಕೇಷನಲ್, ಕಲ್ಚರಲ್ ಮತ್ತು ಸೋಷಿಯಲ್ ಡೆವಲಪ್‌ಮೆಂಟ್ ಸೊಸೈಟಿಯ ಅಧ್ಯಕ್ಷರಾದ ಶ್ರೀ ರಾಲ್ಫ್ ಅಂಡ್ರಾಡೆ ಮತ್ತು ಕಾರ್ಯದರ್ಶಿಗಳಾದ ಶ್ರೀ ಸಂಜಯ್ ಎಲ್ ಮತ್ತು ಮ್ಯಾನೇಜಿಂಗ್ ಪಾರ್ಟ್ನರ್ ಆದ ಕೆ12 ಟೆಕ್ನೋ ಸರ್ವೀಸಸ್ ಪ್ರೈವೇಟ್ ಲಿಮಿಟೆಡ್ ಸಂಸ್ಥೆಯ ಮುಖ್ಯಸ್ಥರ ಮತ್ತು ಶಾಲಾ ಪ್ರಾಂಶುಪಾಲರಾದ ಶ್ರೀ ಮಂಜುಳ.ಬಿ ಇವರುಗಳ ವಿರುದ್ಧ ನಾಗರಭಾವಿ ಪೋಲೀಸ್ ಠಾಣೆಯಲ್ಲಿ ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ, ಇಲಾಖೆ, ಬೆಂಗಳೂರು ದಕ್ಷಿಣ ಜಿಲ್ಲೆ ಇವರು ಎಫ್.ಐ.ಆರ್ ದಾಖಲಿಸಿರುತ್ತಾರೆ. |
| ಇ) | ಕಳೆದ 3 ವರ್ಷಗಳಲ್ಲಿ ಮಕ್ಕಳ ಭವಿಷ್ಯದೊಂದಿಗೆ ಚೆಲ್ಲಾಟವಾಡಿರುವ ಎಷ್ಟು ಶಿಕ್ಷಣ ಸಂಸ್ಥೆಗಳ ಬಗ್ಗೆ ಸರ್ಕಾರ ಕ್ರಮ ಕೈಗೊಂಡಿದೆ? (ವಿವರ ನೀಡುವುದು) | ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ರಾಜ್ಯ ಪಠ್ಯಕ್ರಮದಲ್ಲಿ ಅನುಮತಿ ಪಡೆದು ಇತರೆ ಪಠ್ಯಕ್ರಮ ಬೋಧನೆ ಮಾಡುತ್ತಿರುವ ಶಾಲೆಗಳನ್ನು ಗುರುತಿಸಲು ಕ್ರಮವಹಿಸಿ, ಸದರಿ ಶಾಲೆಗಳ ವಿರುದ್ಧ ಶಿಕ್ಷಣ ಕಾಯ್ದೆ ನಿಯಮಗಳಡಿಯಲ್ಲಿ ನೋಟೀಸ್ ನೀಡಿ ಸೂಕ್ತ ಕ್ರಮಕೈಗೊಳ್ಳಲು ಉಪನಿರ್ದೇಶಕರುಗಳಿಗೆ ಸೂಚನೆ ನೀಡಲಾಗಿದೆ. |

ಸಂಖ್ಯೆ: ಇಪಿ 76 ಪಿಜಿಸಿ 2023

(ಬಿ.ಸಿ. ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು.